**<u>ಸಾಕ್ಷಿಯನ್ನು ದಿನಾಂಕ:04.08.2026 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**
**<u>ಸಾಕ್ಷಿಯ ಪ್ರಮಾಣೀಕೃತ ಹೇಳಿಕೆಃ</u>**

ಇಂದು ನಾನು ನ್ಯಾಯಾಲಯಕ್ಕೆ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದೇನೆ. ಅದರಲ್ಲಿರುವ ಎಲ್ಲಾ ಮಾಹಿತಿಗಳು ಸತ್ಯವಾಗಿವೆ. ಅದನ್ನು ಬರೆಯಲು ನಮ್ಮ ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಅದರಲ್ಲಿರುವ ಎಲ್ಲಾ ಅಂಶಗಳನ್ನು ಅರ್ಥೈಸಿಕೊಂಡು ಅದಕ್ಕೆ ನಾನು ಸಹಿ ಹಾಕಿರುತ್ತೇನೆ.

**<u>ನಾನು ನ್ಯಾಯಾಲಯಕ್ಕೆ ಈ ದಿನ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸುತ್ತಿದ್ದು</u>**

1. ಒಂದು ಚೆಕ್ಕನ್ನು ಹಾಜರುಪಡಿಸಿದ್ದು ಅದನ್ನು ನಿಪಿ**-1** ಎಂದು, ಆರೋಪಿತನ ಸಹಿಗಳನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ **- 1(**ಎ**)** ಎಂದು
2. ಬ್ಯಾಂಕ್ ನವರ ಹಿಂಬರಹವನ್ನು (funds insufficient) ನಿಪಿ**-2** ಎಂದು
3. ದಿಃ 16.12.2025 ರಂದು ಆರೋಪಿಗೆ ಕಳುಹಿಸಿರುವ ನೋಟಿಸನ್ನು ನಿಪಿ**-3** ಎಂದು
4. ಅಂಚೆ ರಸೀದಿಯನ್ನು ನಿಪಿ**-4** ಎಂದು
5. ಅಂಚೆ ಸ್ವೀಕೃತಿಯನ್ನು ನಿಪಿ-5 ಎಂದು ಗುರುತಿಸಲಾಯಿತು.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ)**

**ಓ. ಹೇ. ಕೇ. ಸರಿ ಇದೆ.**

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,
ಪಿರಿಯಾಪಟ್ಟಣ.